# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103
ದೂರವಾಣಿ: 0816–2254546, 0816–2255596, 0816–2255597 ಫ್ಯಾಕ್ಸ್: 0816–2270719

**ಸಂಖ್ಯೆ:ತು.ವಿ:ಖ.ಕೋ:2023–24/ 819** **ದಿನಾಂಕ:02.06.2023.**

**ದರಪಟ್ಟಿ ಆಹ್ವಾನ (ವಿ.ವಿ ವೆಬ್‌ಸೈಟ್ ಮುಖಾಂತರ)**

**ವಿಷಯ:** ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗಕ್ಕೆ ಅವಶ್ಯವಿರುವ ಉಪಕರಣಗಳನ್ನು ಸರಬರಾಜು ಮಾಡುವ ಕುರಿತು.

**ಉಲ್ಲೇಖ:** 1. ಸಂಯೋಜಕರು, ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗ ತು.ವಿ.ತು ಇವರ ಪತ್ರ ದಿನಾಂಕ: 07.02.2023.

2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:08.03.2023.(ಕಂಡಿಕೆ–10)

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗಕ್ಕೆ ಅಗತ್ಯವಿರುವ ಉಪಕರಣಗಳನ್ನು ಸರಬರಾಜು ಪಡೆಯಲು ಉಲ್ಲೇಖ (01)ರ ಬೇಡಿಕೆ ಪತ್ರದಂತೆ ಹಾಗೂ ಕಂಡಿಕೆ (02) ರ ಮಾನ್ಯ ಕುಲಪತಿಗಳ ಅನುಮೋದನೆಯಂತೆ ಕೆಳಕಂಡ ಷರತ್ತುಗಳಿಗೊಳಪಟ್ಟು ನೋಂದಾಯಿತ ಆಸಕ್ತ ಸಂಸ್ಥೆಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

**ಉಪಕರಣಗಳ ಮಾದರಿ, ವೈಶಿಷ್ಟತೆ ವಿವರಗಳು ಈ ಕೆಳಕಂಡಂತಿವೆ.**

| Sl. No. | Name of the Instruments | Quantity | Rate to be quoted per Chart (Incl. of all taxes) |
|---|---|---|---|
| 1 | Dessecting / Simple Microscope | 10 | |
| 2 | Phototrophic Chamber | 01 | |
| 3 | Clinostat | 01 | |
| 4 | Rain guage | 01 | |

**ಷರತ್ತುಗಳು:**

1. ಮುಚ್ಚಿದ ಲಕೋಟೆಯ ಮೇಲೆ **"ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗಕ್ಕೆ ಅವಶ್ಯವಿರುವ Bio-Visuals Chartಗಳನ್ನು ಸರಬರಾಜು ಮಾಡಲು ದರಪಟ್ಟಿ"** ಎಂದು ನಮೂದಿಸುವುದು.
2. **ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು– 572 103,** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರಿಯಾಗುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ: 12.06.2023 ಅಪರಾಹ್ನ 12.30ಗಂಟೆ.**
4. ದರಪಟ್ಟಿಯನ್ನು **ದಿನಾಂಕ: 12.06.2023 ರಂದು ಅಪರಾಹ್ನ 04.30**ಕ್ಕೆ ತೆರೆಯಲಾಗುವುದು.
5. ಸರಬರಾಜು ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ಕಡ್ಡಾಯವಾಗಿ ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
6. ಸರಬರಾಜು ಮಡಲು ಯಾವುದೇ ಮುಂಗಡ ನೀಡಲಾಗುವುದಿಲ್ಲ.
7. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಸಾಗಾಣಿಕಾ ವೆಚ್ಚವನ್ನು ಒಳಗೊಂಡಿರತಕ್ಕದ್ದು.
8. ದರಪಟ್ಟಿಯನ್ನು ಅಂಗೀಕರಿಸುವಾಗ ಸಂಸ್ಥೆಗಳು ಸಲ್ಲಿಸಿದ ದರಪಟ್ಟಿಯ ಸರಾಸರಿ ಮೊತ್ತವನ್ನು ಪರಿಗಣಿಸಲಾಗುವುದು.
9. ಸರಬರಾಜುದಾರರು ನಮೂದಿಸುವ ದರಗಳು ಮೂರು ತಿಂಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.
10. ಸರಬರಾಜುದಾರರು ಈಗಾಗಲೇ ಸರಬರಾಜು ಮಾಡುತ್ತಿರುವ ಸಂಸ್ಥೆಗಳ ವಿವರಗಳನ್ನು ಮತ್ತು ಅವುಗಳ ದಾಖಲೆಗಳನ್ನು ಲಗತ್ತಿಸುವುದು.
11. ಸಾಮಗ್ರಿಗಳ ಪ್ರಮಾಣಗಳನ್ನು ಹೆಚ್ಚಿಸುವ ಅಥವಾ ಕಡಿಮೆಗೊಳಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿರುತ್ತದೆ.
12. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
13. ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
14. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
15. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.

16. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಸಂಯೋಜಕರು, ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗ ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

02/06/2023

ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು).
3. ಸಂಯೋಜಕರು, ಸ್ನಾತಕೋತ್ತರ ಸಸ್ಯಶಾಸ್ತ್ರ ಅಧ್ಯಯನ & ಸಂಶೋಧನಾ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಕಚೇರಿ ಪ್ರತಿ.